ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 10 ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 16/2/2021

# ವಿಜಯಪುರ ವಿಮಾನನಿಲ್ದಾಣ ಕಾಮಗಾರಿಗೆ ಸಿಎಂ ಚಾಲನೆ

ವಿಜಯಪುರ: ವಿಜಯಪುರ ವಿಮಾನ ನಿಲ್ದಾಣದ ಅಭಿವೃದ್ಧಿ ಹಾಗೂ ಕಾರ್ಯಾಚರಣೆಯನ್ನು ಭಾರತೀಯ ವಿಮಾನಯಾನ ಪ್ರಾಧಿಕಾರದ ಉಡಾನ್ ಯೋಜನೆಯಡಿ ಸೇರ್ಪಡೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಭರವಸೆ ನೀಡಿದರು.

ವಿಜಯಪುರದಲ್ಲಿ 220ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ನೂತನ ವಿಮಾನ ನಿಲ್ದಾಣ ಕಾಮಗಾರಿಗೆ ಶಿವಮೊಗ್ಗದಲ್ಲಿ ಆಯೋಜಿಸಲಾಗಿದ್ದ ವರ್ಚುವಲ್ ಕಾರ್ಯಕ್ರಮ ಮೂಲಕ ಶಂಕುಸ್ಥಾಪನೆ ನೆರವೇರಿಸಿ ಸಂದೇಶ ನೀಡಿದ ಅವರು, ಮುಂದಿನ ದಿನಗಳಲ್ಲಿ ವಿಜಯಪುರ ವಿಮಾನ ನಿಲ್ದಾಣದಲ್ಲಿಯೂ ಏರ್‌ಬಸ್ -320 ಗಳ ಹಾರಾಟಕ್ಕಾಗಿ ವಿಸ್ತರಿಸಲು ಅನುಕೂಲವಾಗುವಂತೆ

ಈಗಾಗಲೇ ಕಲ್ಯಾಣ ಕರ್ನಾಟಕ ಭಾಗದ ಕಲಬುರ್ಗಿ, ಬೀದರ್ ವಿಮಾನ ನಿಲ್ದಾಣಗಳ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ. ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿಗಳು ಶೀಘ್ರಗತಿಯಲ್ಲಿ ನಡೆಯುತ್ತಿದ್ದು, ಅದೇ ರೀತಿ ವಿಜಯಪುರ ವಿಮಾನ ನಿಲ್ದಾಣದ ಕಾಮಗಾರಿ ಸಹ ನಿಗದಿತ ಅವಧಿಯಲ್ಲಿ




**ವಿಜಯಪುರ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಶಿವಮೊಗ್ಗೆಯಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಶಿಲಾನ್ಯಾಸ ನೆರವೇರಿಸಿದ ಸಂದರ್ಭ.**

ಪೂರ್ಣಗೊಳಿಸಲಾಗುವುದು ಎಂದರು.

ಶೀಘ್ರವಾಗಿ ಬೆಳೆಯುತ್ತಿರುವ ಆರ್ಥಿಕ ಮತ್ತು ಪ್ರವಾಸೋದ್ಯಮದ ಪ್ರಾಮುಖ್ಯತೆಯನ್ನು ಗಮನದಲ್ಲಿರಿಸಿಕೊಂಡು 727 ಎಕರೆ ಜಮೀನಿನಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ವಿಮಾನ ನಿಲ್ದಾಣ ಅಭಿವೃದ್ಧಿಪಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಉತ್ಕೃಷ್ಟ ಗುಣಮಟ್ಟದ ದ್ರಾಕ್ಷಿ, ದಾಳಿಂಬೆ ಹಾಗೂ ನಿಂಬೆ ಹಣ್ಣನ್ನು ಬೆಳೆಯಾಗುತ್ತಿದೆ, ಈ ಎಲ್ಲ ಹಣ್ಣುಗಳನ್ನು ರಫ್ತು ಮಾಡುವ ನಿಟ್ಟಿನಲ್ಲಿಯೂ ಹೆಚ್ಚಿನ ಸೇವೆ ವಿಸ್ತರಿಸಲಾಗುವುದು ಎಂದರು.

## ನಂಬರ್ ಒನ್ ಸ್ಥಾನದ ವಿಶ್ವಾಸ

ಇನ್ನೂ ಕೆಲವೇ ದಿನಗಳಲ್ಲಿ ವಿಜಯಪುರ ಜಿಲ್ಲೆಯು ಉತ್ತರ ಕರ್ನಾಟಕದಲ್ಲಿಯೇ ನಂಬರ್ ಒನ್ ಸ್ಥಾನಕ್ಕೆ ತಲುಪಲಿದೆ ಎಂದು ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ವಿಶ್ವಾಸ ವ್ಯಕ್ತಪಡಿಸಿದರು.

ಸಂಸದ ಬಿ.ವೈ.ರಾಘವೇಂದ್ರ, ವಿಧಾನ ಪರಿಷತ್ ಸದಸ್ಯ ರುದ್ರೇಗೌಡ, ಶಾಸಕ ಅರಗ ಜ್ಞಾನೇಂದ್ರ, ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಮುಖ್ಯ ಕಾರ್ಯದರ್ಶಿ ಕಪಿಲ್ ಮೋಹನ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ಎಸ್.ಸೆಲ್ವಕುಮಾರ್, ಜಿಲ್ಲಾಧಿಕಾರಿ ಕೆ.ಬಿ.ಶಿವಕುಮಾರ್, ವಿಜಯಪುರದಲ್ಲಿ ನಡೆದ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಸಂಸದ ರಮೇಶ ಜಿಗಜಿಣಗಿ, ಶಾಸಕ ಡಾ.ದೇವಾನಂದ ಚವ್ಹಾಣ ಮೊದಲಾದವರು ಪಾಲ್ಗೊಂಡಿದ್ದರು.